All India Radio: Bangalore
Regional Bulletin In Kannada
07.10.2025 / 6.40 p.m.

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು :

- ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಹಿನ್ನೆಲೆ; ಸರ್ಕಾರಿ, ಅನುದಾನಿತ ಶಾಲೆಗಳ ದಸರಾ ರಜೆ ವಿಸ್ತರಣೆ
- ಒತ್ತಡಕ್ಕೆ ಮಣಿದು ಪೂರ್ವ ತಯಾರಿ ಇಲ್ಲದೇ ಸಮೀಕ್ಷೆ - ಬಿಜೆಪಿ ಆರೋಪ
- ಶೃಂಗೇರಿ ಬಳಿ ೧೦೦ ಹಾಸಿಗೆಗಳ ಸುಸಜ್ಜಿತ ಸರ್ಕಾರಿ ಆಸ್ಪತ್ರೆಗೆ ಸಚಿವ ದಿನೇಶ್ ಗುಂಡೂರಾವ್ ಶಂಕುಸ್ಥಾಪನೆ
- ರಾಜ್ಯದ ಪಠ್ಯ ಕ್ರಮದಲ್ಲಿ ವಾಲ್ಮೀಕಿ, ರಾಮಾಯಣ ಸೇರಿಸಲು ಸರ್ಕಾರ ಚಿಂತನೆ

<><><><>

ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆ  ನಿರೀಕ್ಷೆಯಂತೆ ಮುಗಿಯದ ಕಾರಣ ಜಾತಿಗಣತಿ ಅವಧಿಯನ್ನು ವಿಸ್ತರಿಸಲಾಗಿದೆ. ಶಿಕ್ಷಕರನ್ನು ಸಮೀಕ್ಷೆಗೆ ಪೂರ್ಣ ಪ್ರಮಾಣದಲ್ಲಿ ಬಳಸಿಕೊಳ್ಳಲು ತೀರ್ಮಾನಿಸಲಾಗಿದೆ. ಸರ್ಕಾರಿ ಮತ್ತು ಅನುದಾನಿತ ಶಾಲೆಗಳಿಗೆ ದಸರಾ ರಜೆಯನ್ನು ಇದೇ ೧೮ರವರೆಗೆ ಮುಂದುವರಿಸಲು ನಿರ್ಧರಿಸಲಾಗಿದೆ. ಖಾಸಗಿ ಶಾಲೆಗಳಿಗೆ ಈ ರಜೆ ಅನ್ವಯವಾಗುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಧ್ವನಿ : ಸಿದ್ದರಾಮಯ್ಯ

ಇಂದು ಮುಗಿಯಬೇಕಿದ್ದ ಸಮೀಕ್ಷೆ ಇನ್ನೂ ಕೆಲವು ಜಿಲ್ಲೆಗಳಲ್ಲಿ ಪೂರ್ತಿ ಆಗಿಲ್ಲ. ಸುಮಾರು ೧ ಲಕ್ಷ ೨೦ ಸಾವಿರ ಶಿಕ್ಷಕರು ಸೇರಿ ಒಂದು ಲಕ್ಷ ಅರವತ್ತು ಸಾವಿರ ಸಿಬ್ಬಂದಿ ಸಮೀಕ್ಷೆಯಲ್ಲಿ ತೊಡಗಿದ್ದಾರೆ. ವಿಧಾನ ಪರಿಷತ್ ಸದಸ್ಯ ಪುಟ್ಟಣ್ಣ ಮತ್ತು ಶಿಕ್ಷಕರ ಸಂಘ ಹೆಚ್ಚುವರಿಯಾಗಿ ೧೦ ದಿನಗಳ ಕಾಲಾವಕಾಶ ಕೇಳಿ ಮನವಿಯನ್ನು ಪುರಸ್ಕರಿಸಿ ಇದೇ ೧೮ರ ವರೆಗೆ ಸರ್ಕಾರಿ, ಅನುದಾನಿತ ಶಾಲೆಗಳಿಗೆ ೮ ದಿನ ಹೆಚ್ಚುವರಿಯಾಗಿ ರಜೆ ಘೋಷಿಸಲಾಗಿದೆ. ಇದೇ ೧೨ನೇ ತಾರೀಕಿನಿಂದ ದ್ವಿತೀಯ ಪಿಯು ಮಧ್ಯಂತರ ಪರೀಕ್ಷೆ ನಡೆಯುತ್ತಿರುವುದರಿಂದ ಸಮೀಕ್ಷೆ ಕಾರ್ಯದಿಂದ ಪಿಯುಸಿ ಉಪನ್ಯಾಸಕರಿಗೆ ವಿನಾಯ್ತಿ ನೀಡಲಾಗಿದೆ ಎಂದು ಅವರು ತಿಳಿಸಿದರು.

ಬೆಂಗಳೂರು ನಗರದಲ್ಲಿ ೬ ಸಾವಿರದ ೭೦೦ ಜನ ಶಿಕ್ಷಕರು ಸಮೀಕ್ಷೆಯಲ್ಲಿ ತೊಡಗಿಸಿಕೊಂಡಿದ್ದಾರೆ. ಬೆಂಗಳೂರಿನಲ್ಲಿ ೪೬ ಲಕ್ಷ ಮನೆಗಳಿವೆ. ದಿನಕ್ಕೆ ೧೦-೧೫ ಮನೆಗಳ ಸಮೀಕ್ಷೆ ನಡೆಸುವ ಗುರಿ ನೀಡಲಾಗಿದೆ. ಬೆಂಗಳೂರಿನಲ್ಲಿ ದೀಪಾವಳಿಯ ಮೊದಲು ಸಮೀಕ್ಷೆ ಮುಗಿಸಲು ಸೂಚಿಸಲಾಗಿದೆ. ಸಮೀಕ್ಷೆ ನಡೆಯುವಾಗ ಮೂವರು ಶಿಕ್ಷಕರು ಮೃತಪಟ್ಟಿದ್ದಾರೆ. ಇವರಿಗೆ ತಲಾ ೨೦ ಲಕ್ಷ ಪರಿಹಾರ ನೀಡಲಾಗುವುದು ಎಂದ ಅವರು, ಸಮೀಕ್ಷೆಯಲ್ಲಿ ತೊಡಗಿಸಿಕೊಳ್ಳಲು ಹಿಂದೇಟು ಹಾಕುವವರ ವಿರುದ್ಧ ಸರ್ಕಾರ ಶಿಸ್ತಿನ ಕ್ರಮ ಕೈಗೊಳ್ಳಲಿದೆ ಎಂದು ಅವರು ತಿಳಿಸಿದರು.

<><><><>

ರಾಜ್ಯದಲ್ಲಿ ನಡೆಯುತ್ತಿರುವ ಜಾತಿಗಣತಿ ದಿನದಿಂದ ದಿನಕ್ಕೆ ಗೊಂದಲಮಯವಾಗುತ್ತಿದೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ. ಯಾರದ್ದೋ ಒತ್ತಡಕ್ಕೇ ಮಣಿದು ಪೂರ್ವ ತಯಾರಿ ಇಲ್ಲದೇ ಜಾತಿಗಣತಿ ನಡೆಸಲಾಗುತ್ತಿದೆ ಎಂದು ಆರೋಪಿಸಿದ್ದಾರೆ. ರಾಜ್ಯದಲ್ಲಿ ಸಮೀಕ್ಷೆಯಿಂದ ಶಿಕ್ಷಕರು ತೊಂದರೆಗಳನ್ನು ಎದುರಿಸುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕಾಂತರಾಜ್ ಆಯೋಗದ ವರದಿಯ ಸಮಯದಲ್ಲೂ ಇದೇ ರೀತಿಯ ಗೊಂದಲ ಮತ್ತು ಅವ್ಯವಸ್ಥೆ ಉಂಟಾಗಿದೆ. ಈಗ ಅದೇ ಪರಿಸ್ಥಿತಿ ಪುನಾರಾವರ್ತನೆ ಆಗುತ್ತಿದೆ ಎಂದು ಅವರು ದೂರಿದ್ದಾರೆ.

<><><><>

ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ಬಳಿಯ ಬೆಳ್ಳಂದೂರಿನಲ್ಲಿ ೧೦೦ ಹಾಸಿಗೆ ಸಾಮರ್ಥ್ಯದ ಸುಸಜ್ಜಿತ ಸರ್ಕಾರಿ ಆಸ್ಪತ್ರೆ ನಿರ್ಮಾಣ ಮಾಡಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದಾರೆ. ಶೃಂಗೇರಿಯ ಬೆಳ್ಳಂದೂರಿನಲ್ಲಿಂದು ಆಸ್ಪತ್ರೆ ನಿರ್ಮಾಣ ಕಾರ್ಯಕ್ಕೆ ಶಂಕುಸ್ಥಾಪನೆ ನೆರವೇರಿಸಿದ ಬಳಿಕ ಮಾತನಾಡಿದ ಅವರು ಸುಮಾರು ೩೭ ಕೋಟಿ ೬೦ ಲಕ್ಷ ರೂಪಾಯಿ ವೆಚ್ಚದಲ್ಲಿ ಆಸ್ಪತ್ರೆ ನಿರ್ಮಾಣ ಮಾಡಲಾಗುವುದು. ಶೃಂಗೇರಿ ತಾಲೂಕಿನಲ್ಲಿ ಆಸ್ಪತ್ರೆ ನಿರ್ಮಾಣ ಆಗಬೇಕೆಂಬುದು ಬಹು ವರ್ಷದ ಬೇಡಿಕೆ ಆಗಿದೆ. ನಮ್ಮ ಸರ್ಕಾರ ಈ ಭರವಸೆಯನ್ನು ಈಡೇರಿಸಲಿದ್ದು ಸುತ್ತ ಮುತ್ತಲಿನ ಗ್ರಾಮಗಳ ಜನರ ಆರೋಗ್ಯದ ದೃಷ್ಠಿಯಿಂದ ಆಸ್ಪತ್ರೆ ಕಟ್ಟಡ ಮಂಜೂರು ಮಾಡಲಾಗಿದೆ. ಹಾಗೆಯೆ ಆದಷ್ಟು ಶೀಘ್ರ ಕಾಮಗಾರಿ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದ್ದು ಆಸ್ಪತ್ರೆಗೆ ಸುಸರ್ಜಿತ ಕಟ್ಟಡ ಹಾಗು

ವೈದ್ಯರು ಸಿಬ್ಬಂದಿಗಳ ನಿಯೋಜನೆ ಮಾಡಲಾಗುವುದು ಎಂದರು. ಕಾರ್ಯಕ್ರಮದಲ್ಲಿ ಇಂಧನ ಸಚಿವ ಕೆ.ಜೆ.ಜಾರ್ಜ್, ಶಾಸಕ ಟಿ.ಡಿ ರಾಜೇಗೌಡ, ಜಿಲಾಧಿಕಾರಿ ಮೀನ ನಾಗರಾಜ್ ಸೇರಿ ಹಲವು ಗಣ್ಯರು ಹಾಜರಿದ್ದರು.

<><><><>

ಮಹರ್ಷಿ ವಾಲ್ಮೀಕಿ ಹಾಗೂ ರಾಮಾಯಣವನ್ನು ರಾಜ್ಯದ ಶಾಲಾ ಪಠ್ಯ ಕ್ರಮದಲ್ಲಿ ಸೇರಿಸುವ ಬಗ್ಗೆ ರಾಜ್ಯ ಸರ್ಕಾರ ಪರಿಶೀಲನೆ ನಡೆಸಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾಜಿ ಸಚಿವ ವಿ.ಎಸ್. ಉಗ್ರಪ್ಪ ಅವರ ಬೇಡಿಕೆಯನ್ನು ಸಕಾರಾತ್ಮಕವಾಗಿ ಪರಿಗಣಿಸಲಾಗುವುದು ಎಮದು ಹೇಳಿದ್ದಾರೆ. ಇದೇ ವೇಳೆ ವಾಲ್ಮೀಕಿ ಸಮುದಾಯದ ಪ್ರತಿಯೊಬ್ಬ ಸದಸ್ಯರು ಶಿಕ್ಷಣಕ್ಕೆ ಆದ್ಯತೆ ನೀಡಬೇಕು ಎಂದು ಕರೆ ನೀಡಿದ್ದಾರೆ.

<><><><>

ರಾಜ್ಯಾದ್ಯಂತ ಜಿಲ್ಲಾಡಳಿತಗಳು ಹಾಗೂ ವಿವಿಧ ಸಂಘ ಸಂಸ್ಥೆಗಳ ಆಶ್ರಯದಲ್ಲಿ ಇಂದು ವಾಲ್ಮೀಕಿ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸಲಾಯಿತು. ಗದಗ ಜಿಲ್ಲೆಯ ನಾಗಾವಿ ಗ್ರಾಮದಲ್ಲಿರುವ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಆದಿಕವಿ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ ಜರುಗಿತು. ವಿಶ್ವವಿದ್ಯಾಲಯದ ಕುಲಸಚಿವ ಪ್ರೊ. ಡಾ.ಸುರೇಶ ನಾಡಗೌಡರ ಅವರು ಮಾತನಾಡಿ, "ಭಾರತದ ಸಂಸ್ಕೃತಿ ಮತ್ತು ತತ್ವಜ್ಞಾನವು ಮಾನವ ಜೀವನದ ನೈತಿಕ ಮತ್ತು ಆಧ್ಯಾತ್ಮಿಕ ಮೌಲ್ಯಗಳನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದರು. ಎನ್‌ಎಸ್‌ಎಸ್ ಕಾರ್ಯಕ್ರಮ ಸಂಯೋಜಕ ಪ್ರಕಾಶ ಮಾಚೇನಹಳ್ಳಿ, ವಿಶ್ವವಿದ್ಯಾಲಯದ ಆಡಳಿತಾಧಿಕಾರಿ ಶಶಿಭೂಷಣ ದೇವೂರು ಸೇರಿದಂತೆ ಹಲವಾರು ಗಣ್ಯರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ವಿಜಯಪುರದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಶಾಸಕ ವಿಠ್ಠಲ ಕಟಕದೊಂಡ್, ರಾಮಾಯಣ ಮಹಾಕಾವ್ಯದಲ್ಲಿ ಮಾನವೀಯ ಹಾಗೂ ಸಾಮಾಜಿಕ ಮೌಲ್ಯಗಳು ಒಳಗೊಂಡಿದ್ದು ಆ ಜೀವನ ಮೌಲ್ಯಗಳನ್ನು ಆದಿಕವಿ ಮಹರ್ಷಿ ವಾಲ್ಮೀಕಿ ಜಗತ್ತಿಗೆ ನೀಡಿದ್ದಾರೆ ಎಂದು ಹೇಳಿದರು. ಜಿಲ್ಲಾಧಿಕಾರಿ ಡಾ.ಆನಂದ.ಕೆ. ಮಾತನಾಡಿ, ವಾಲ್ಮೀಕಿ ಮಹರ್ಷಿ ರಾಮಾಯಣದ ಕಾವ್ಯದಲ್ಲಿ ಉಲ್ಲೇಖಿಸಿರುವ ಚಿಂತನೆಗಳನ್ನು ತಿಳಿದುಕೊಳ್ಳಬೇಕು. ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಂಡು ಸಮಾಜಕ್ಕೆ

ತಮ್ಮ ಕೊಡುಗೆ ನೀಡಬೇಕು ಎಂದು ಹೇಳಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಉಪಸ್ಥಿತರಿದ್ದರು. ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿಯಲ್ಲಿ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಆಚರಿಸಲಾಯಿತು. ವಾಲ್ಮೀಕಿ ಭಾವ ಚಿತ್ರಕ್ಕೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಸಚಿವ ಕೆ.ಜೆ. ಜಾರ್ಜ್ ಪುಷ್ಪಾರ್ಚನೆ ಮಾಡುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದರು. ಜಿಲ್ಲಾಡಳಿತದ ವತಿಯಿಂದ ಚಿಕ್ಕಮಗಳೂರಿನ ಕುವೆಂಪು ಕಲಾಮಂದಿರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಶಾಸಕ ಹೆಚ್.ಡಿ ತಮ್ಮಯ್ಯ, ಪರಿಷತ್ ಸದಸ್ಯ ಸಿ.ಟಿ ರವಿ ಸೇರಿ ಹಲವು ಗಣ್ಯರು ಭಾಗವಹಿಸಿದರು. ವಿಜಯಪುರದ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ವಾಲ್ಮೀಕಿ ಅಧ್ಯಯನ ಪೀಠ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಘಟಕದ ಸಹಯೋಗದಲ್ಲಿ ಆಯೋಜಿಸಲಾದ ವಾಲ್ಮೀಕಿ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ವಿಜಯಾ ಬಿ.ಕೋರಿಶೆಟ್ಟಿ ಅವರು, "ಒಬ್ಬ ವ್ಯಕ್ತಿ ಪರಿವರ್ತನೆಯಾದರೆ, ಸಮಾಜದ ರೂಪವೇ ಬದಲಾಗಬಹುದು ಎಂಬುದನ್ನು ಮಹರ್ಷಿ ವಾಲ್ಮೀಕಿ ತೋರಿಸಿಕೊಟ್ಟಿದ್ದಾರೆ. ಅವರು ಕೇವಲ ಮಹಾಕವಿ ಮಾತ್ರವಲ್ಲ, ಪರಿವರ್ತನೆಯ ಹರಿಕಾರರಾಗಿದ್ದಾರೆ," ಎಂದು ಹೇಳಿದರು. ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಕುಲಸಚಿವ ಶಂಕರಗೌಡ ಸೋಮನಾಳ ಉಪಸ್ಥಿತರಿದ್ದರು. ? ಚಿಕ್ಕಬಳ್ಳಾಪುರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಆದಿಕವಿ ಮಹರ್ಷಿ ವಾಲ್ಮೀಕಿ ಜಯಂತಿ ಮಹೋತ್ಸವ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ವಾಲ್ಮೀಕಿ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು. ಭಾರತದ ಎರಡು ಮಹಾಕಾವ್ಯಗಳಲ್ಲಿ ಒಂದಾದ ರಾಮಾಯಣವನ್ನು ರಚಿಸಿದ ಆದಿ ಕವಿ ವಾಲ್ಮೀಕಿಯವರು, ರಾಮಾಯಣ ಕೃತಿಯಲ್ಲಿ ಇಂದು ಸಮಾಜದಲ್ಲಿ ನಡೆಯುತ್ತಿರುವ ಅನೇಕ ಸತ್ಯಗಳನ್ನು ಹೇಳಿದ್ದಾರೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ. ಕಾರ್ಯಕ್ರಮದಲ್ಲಿ ವಾಲ್ಮೀಕಿ ಸಮುದಾಯಕ್ಕೆ ಸೇರಿದ ವಿವಿಧ ಕ್ಷೇತ್ರಗಳ ಸಾಧಕರನ್ನು ಸನ್ಮಾನಿಸಲಾಯಿತು ಹಾಗೂ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರೊತ್ಸಾಹಧನದ ಚೆಕ್ಕುಗಳನ್ನು ವಿತರಿಸಲಾಯಿತು. ಶಾಸಕ ಪ್ರದೀಪ್ ಈಶ್ವರ್ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಕಲಬುರಗಿಯ ಡಾ.ಎಸ್.ಎಂ.ಪಂಡಿತ್

ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್,ಸಮಾಜ ಕಲ್ಯಾಣ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ ಮಹರ್ಷಿ ವಾಲ್ಮೀಕಿ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ವಾಲ್ಮೀಕಿ ಭಾವಚಿತ್ರಕ್ಕೆ ಶಾಸಕ ಅಲ್ಲಮಪ್ರಭು ಪಾಟೀಲ ಪುಷ್ಪಾರ್ಚನೆ ಸಲ್ಲಿಸಿ ಉದ್ಘಾಟಿಸಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>